# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು

**ಓದಲಾಗಿದೆ:**
1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ/219/ಬಿಆರ್‌ಎಸ್/2016 ದಿನಾಂಕ 03.02.2017.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಸೂಚನಾದೇಶ ಪತ್ರ ದಿನಾಂಕ 01.03.2017.

**ಪ್ರಸ್ತಾವನೆ:**

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ 2016-17ನೇ ಸಾಲಿನ ಆಯವ್ಯಯದಲ್ಲಿ ಲೆ.ಶೀ.5054-03-337-0-71-422 ಎಸ್.ಸಿ.ಪಿ.ಯಡಿ ರೂ.193.48 ಕೋಟಿ ಮತ್ತು 5054-03-337-0-71-423 ಟಿ.ಎಸ್.ಯಡಿ ರೂ.87.77 ಕೋಟಿ ಸೇರಿ ರೂ.281.25 ಕೋಟಿ ಉಳಿತಾಯವಾಗುವುದರಿಂದ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಯಲ್ಲಿ ದಿನಾಂಕ 25.10.2016 ರಂದು ನಿರ್ಣಯಿಸಿದಂತೆ ಮೇಲೆ ಓದಲಾದ 1 ರಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಕಾಲೋನಿಗಳಿಗೆ ಸಂಪರ್ಕ ರಸ್ತೆ ಮತ್ತು ಕಾಲೋನಿಗಳಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿಗಳನ್ನು ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ ನಿರ್ಮಾಣ ಮಾಡಲು ಮರುಹೊಂದಾಣಿಕೆ ಮಾಡಿ ಆದೇಶ ಹೊರಡಿಸಲಾಗಿದೆ.

ಪ್ರಸ್ತುತ ಓದಲಾದ-2 ರಂತೆ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಕಾಲೋನಿಗಳಿಗೆ ಸಂಪರ್ಕ ರಸ್ತೆ ಕಲ್ಪಿಸಲು ಹಾಗೂ ಕಾಲೋನಿಗಳಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿಗಳನ್ನು ರೂ.100.00 ಲಕ್ಷಗಳ ಮೊತ್ತದಲ್ಲಿ ನಿರ್ಮಾಣ ಮಾಡಲು ಸರ್ಕಾರವು ತೀರ್ಮಾನಿಸಿದೆ.

ಪ್ರಯುಕ್ತ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:75/80:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ: 01.03.2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಕಾಲೋನಿಗಳಿಗೆ ಸಂಪರ್ಕ ರಸ್ತೆ ಕಲ್ಪಿಸಲು ಹಾಗೂ ಕಾಲೋನಿಗಳಲ್ಲಿ ಸಿ.ಸಿ.ರಸ್ತೆ ಮತ್ತು ಚರಂಡಿಗಳನ್ನು ರೂ.100.00 ಲಕ್ಷಗಳ ಮೊತ್ತದಲ್ಲಿ ಲೆಕ್ಕ ಶೀರ್ಷಿಕೆ ಲೆ.ಶೀ.5054-03-337-0-71-422/423 ರಡಿ ಅಭಿವೃದ್ಧಿಪಡಿಸಲು ಹಾಗೂ ಕೆಟಿಟಿಪಿ ಕಾಯ್ದೆಯಡಿ ಅಲ್ಪಾವಧಿ ಟೆಂಡರ್ ಕರೆದು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಮುಖಾಂತರ ಮಾನ್ಯ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಶಾಸಕರು ಸೂಚಿಸುವ ಕಾಮಗಾರಿಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು**

1. ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ತಾಲ್ಲೂಕುಗಳಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಸಂಪರ್ಕ ರಸ್ತೆ ಕಲ್ಪಿಸಲು ಹಾಗೂ ಕಾಲೋನಿಗಳಲ್ಲಿ ಸಿ.ಸಿ. ರಸ್ತೆ ಮತ್ತು ಚರಂಡಿಗಳನ್ನು ರೂ.1.00 ಕೋಟಿಗಳಲ್ಲಿ ಅಭಿವೃದ್ಧಿಪಡಿಸುವುದು.

2. ಸದರಿ ಕಾಮಗಾರಿಗಳನ್ನು ಡಿ.ಪಿ.ಆರ್.ಗಳನ್ನು ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ-2ರ ಮಾನದಂಡಗಳನ್ನು ಅನುಸರಿಸಿಯೇ ಮಾಡತಕ್ಕದ್ದು.

3. ಸದರಿ ಕಾಮಗಾರಿಗಳ ಡಿ.ಪಿ.ಆರ್.ಗಳನ್ನುತಯಾರಿಸುವಾಗ ನಿರ್ಮಾಣ ಮಾಡುವಾಗ 5 ವರ್ಷಗಳ ನಿರ್ವಹಣೆಯು ಒಳಗಂಡಂತೆ, ನಂತರ ಒಂದು ಸಲ ಮರು ಡಾಂಬರೀಕರಣ ಮಾಡುವಾಗಲೂ ಸಹಿತ ಪಿ.ಎಂ.ಜಿ.ಎಸ್.ವೈ.-2ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು.

4. ಗುಣಮಟ್ಟ ಕಾಪಾಡುವ ಹಾಗೂ ಪಾರದರ್ಶಕತೆ ದೃಷ್ಟಿಯಿಂದ ಆಯ್ಕೆಗೊಂಡ ಗ್ರಾಮೀಣ ಮತಕ್ಷೇತ್ರದ ರಸ್ತೆ ಕಾಮಗಾರಿಗಳನ್ನು ಒಟ್ಟು ಗೂಡಿಸಿ, ಕಾಮಗಾರಿಗಳ ಗುಂಪು ರಚಿಸುವ ಮೂಲಕ ಗುತ್ತಿಗೆದಾರರನ್ನು ನೇಮಿಸಿ ಅನುಷ್ಠಾನಗೊಳಿಸುವುದು.

5. ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಸಂಪರ್ಕ ರಸ್ತೆ ಕಲ್ಪಿಸಲು ಹಾಗೂ ಕಾಲೋನಿಗಳಲ್ಲಿ ಸಿ.ಸಿ. ರಸ್ತೆ ಮತ್ತು ಚರಂಡಿ ಕಾಮಗಾರಿಗಳ ಎಲ್ಲಾ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ ಪಾವತಿಯನ್ನು ಮಾಡುವುದು ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಈಗಾಗಲೇ ಸೂಚಿಸಿದಂತೆ ಪಾಲಿಸುವುದು.

6. ಮೂಲ ಗುತ್ತಿಗೆದಾರರಿಂದಲೇ ಕಾಮಗಾರಿ ಪೂರ್ಣಗೊಂಡ ಮೇಲೆ 5 ವರ್ಷಗಳ ನಿರ್ವಹಣೆಗೆ ಹಾಗೂ 6 ನೇ ವರ್ಷದ ನವೀಕರಣಕ್ಕೆ ಒಳಪಡಿಸುವುದು.

7. ಈ ಯೋಜನೆಯನ್ನು ಸ್ವತಂತ್ರ ಮೌಲ್ಯಮಾಪನಕ್ಕೆ ಒಳಪಡಿಸುವುದು.

8. ಗುಣಮಟ್ಟ ರಸ್ತೆ ನಿರ್ಮಾಣಕ್ಕಾಗಿ ಪಿ.ಎಂ.ಜಿ.ಎಸ್.ವೈ-2ರಡಿ ಅಳವಡಿಸಿಕೊಂಡಿರುವ 3 ಹಂತದ ಗುಣಮಟ್ಟದ ವ್ಯವಸ್ಥೆಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳುವುದು.

9. ಈ ಯೋಜನೆಯ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸುವ ಸಂದರ್ಭದಲ್ಲಿ ಜೇಷ್ಠತೆಯ ಪದ್ಧತಿಯನ್ನು ಅನುಸರಿಸಿಕೊಂಡು, ಈ ಜೇಷ್ಠತೆಯ ಆಧಾರದ ಮೇಲೆಯೇ ಪಾವತಿಯನ್ನು ಮಾಡತಕ್ಕದ್ದು ಮತ್ತು ಈ ಕೆಳಕಂಡ ಪದ್ಧತಿಯನನ್ನು ತಪ್ಪದೇ ಅನುಸರಿಸುವುದು.

   1) ಪ್ರತಿ ಕಾಮಗಾರಿಯ ಅಂದಾಜು ಪತ್ರಿಕೆ, ಆಡಳಿತಾತ್ಮಕ ಹಾಗೂ ತಾಂತ್ರಿಕ ಅನುಮೋದನೆ ನೀಡಿದವರ ಹೆಸರು, ಪದನಾಮ ಹಾಗೂ ನೀಡಿದ ದಿನಾಂಕದ ಮಾಹಿತಿ.
   2) ಆಯಾ ಬಿಲ್ಲುಗಳಿಗೆ ಸಂಬಂಧಿಸಿದ ಪರಿವೀಕ್ಷಣಾ ವರದಿ, ಕಾಮಗಾರಿ ಸ್ಥಳದಲ್ಲಿ ಕಾರ್ಯಪಾಲಕ ಇಂಜಿನಿಯರ್ ಅಥವಾ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪರಿವೀಕ್ಷಣೆ ಮಾಡುತ್ತಿರುವ ಫೋಟೋ, ಕಾಮಗಾರಿ ಪೂರ್ಣಗೊಂಡ ಫೋಟೋ ಹಾಗೂ ವಿಡಿಯೋ ಗ್ರಾಫ್ (ರಸ್ತೆ ಕಾಮಗಾರಿಯಾಗಿದ್ದಲ್ಲಿ ರಸ್ತೆ ಪೂರ್ಣ ವಿಡಿಯೋ ಗ್ರಾಫ್).

3) ಕಾಮಗಾರಿ ಪೂರ್ಣಗೊಂಡು ಹಾಗೂ ನಿರ್ವಹಣಾ ಅವಧಿ ಮುಗಿದ ನಂತರ ಯಾರಿಗೆ ಮತ್ತು ಯಾವ ದಿನಾಂಕದಂದು ಹಸ್ತಾಂತರಿಸಲಾಗಿದೆ ಎಂಬುದರ ಸಂಪೂರ್ಣ ಮಾಹಿತಿ ಹಾಗೂ ಹಸ್ತಾಂತರಿಸಿದ ಆಸ್ತಿಯನ್ನು ಸ್ವೀಕರಿಸಿದವರಿಂದ ದೃಢೀಕರಣ.

4) ಈ ಎಲ್ಲ ಅಂಶಗಳನ್ನು ಮುಖ್ಯ ಕಾರ್ಯಾಚರಣೆ ಅಧಿಕಾರಿಗಳವರು ಗಂಭೀರವಾಗಿ ಗಮನಿಸಿ ದೃಢೀಕರಿಸಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು. ಈ ಸೂಚನೆಗಳನ್ನು ನಿರ್ಲಕ್ಷಿಸುವವರನ್ನು ಜವಾಬ್ದಾರರನ್ನಾಗಿ ಹಾಗೂ ಹೊಣೆಗಾರರನ್ನಾಗಿ ಮಾಡಲಾಗುವುದು.

5) ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನಕ್ಕೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:53:ಆರ್‌ಆರ್‌ಸಿ:15(ಭಾಗ-1), ದಿನಾಂಕ:15-5-2015ರಲ್ಲಿನ ಸೂಚನೆಯಂತೆ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ ಪಾವತಿಗಾಗಿ ಸಲ್ಲಿಸುವ ಬಿಲ್ಲುಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಇವರುಗಳು ರಸ್ತೆ ಕಾಮಗಾರಿಗಳ ದಾಖಲೆ ಪರಿಶೀಲಿಸಿ ಬಿಲ್ಲುಗಳ ಮೊತ್ತವು ಕಾಮಗಾರಿಗೆ ಅನುಗುಣವಾಗಿ ಸರಿಯಾಗಿರುವುದೆಂದು ಮತ್ತು ಬಿಲ್ಲು ಮೊತ್ತವು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವುದನ್ನು ದೃಢೀಕರಿಸುವ ಕಾರ್ಯವನ್ನು ತಪ್ಪದೆ ಪಾಲಿಸತಕ್ಕದ್ದು.

6) ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಪ್ರತಿ ಮಾಹೆ ಸರ್ಕಾರಕ್ಕೆ ಒದಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/219/ಬಿಆರ್‌ಎಸ್/2016 ದಿನಾಂಕ 03.02.2017 ರ ಆರ್ಥಿಕ ಮಂಜೂರಾತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ದೊಡ್ಡವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
7. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು , ವಿಧಾನ ಸೌಧ, ಬೆಂಗಳೂರು.

9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
14. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
15. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
16. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
17. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
18. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
19. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಬೆಂಗಳೂರು-9.
20. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಬೆಂಗಳೂರು-9.
21. ಎಲ್ಲಾ ಜಿಲ್ಲಾ-ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
22. ಎಲ್ಲಾ ಪಂಚಾಯತ್ ರಾಜ್ ಇಂಜನಿರಿಂಗ್ ವೃತ್ತಗಳ ಅಧೀಕ್ಷಕ ಇಂಜನಿಯರುಗಳಿಗೆ.
23. ಎಲ್ಲಾ ಪಿ.ಎಂ.ಜಿ.ಎಸ್.ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
24. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
25. ಮಾಹಿತಿ ಕೇಂದಕ್ಕೆ (10 ಪ್ರತಿಗಳು).
26. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.